# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 01 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1038 |
| 02 | ಸದಸ್ಯರ ಹೆಸರು | : ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 03 | ಉತ್ತರಿಸುವ ದಿನಾಂಕ | : 25.07.2024 |
| 04 | ಉತ್ತರಿಸುವ ಸಚಿವರು | : ಮಾನ್ಯ ಗೃಹ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಮಾರತ್‌ಹಳ್ಳಿ, ಜಕ್ಕಸಂದ್ರ, ಸರ್ಜಾಪುರ, ಬೆಳ್ಳಂದೂರು, ದೇವರಬೀಸನಹಳ್ಳಿ, ಕಾಡು ಬೀಸನ ಹಳ್ಳಿ ಮುಂತಾದ ಕಡೆಗಳಲ್ಲಿ ಅಕ್ರಮವಾಗಿ ದೇಶ ಪ್ರವೇಶಿಸಿ ವಾಸಿಸುತ್ತಿರುವ ಬಾಂಗ್ಲಾದೇಶಿಯರ ಕ್ಯಾಂಪ್ ಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ನಗರದಲ್ಲಿ ಮಾರತ್‌ಹಳ್ಳಿ, ಜಕ್ಕಸಂದ್ರ, ಸರ್ಜಾಪುರ, ಬೆಳ್ಳಂದೂರು, ದೇವರಬೀಸನಹಳ್ಳಿ, ಕಾಡು ಬೀಸನ ಹಳ್ಳಿ ಮುಂತಾದ ಕಡೆಗಳಲ್ಲಿ ಕಂದಾಯ ಇಲಾಖೆ ಹಾಗೂ ಬಿಬಿಎಂಪಿ ಅಧಿಕಾರಿಗಳ ಸಹಯೋಗದೊಂದಿಗೆ ಭೇಟಿ ನೀಡಿ ಪರಿಶೀಲಿಸಲಾಗಿ ಯಾವುದೇ ಅಕ್ರಮ ಬಾಂಗ್ಲಾದೇಶಿಯ ಕ್ಯಾಂಪ್‌ಗಳು ಕಂಡುಬಂದಿರುವುದಿಲ್ಲ. |
| ಆ) | ಬೆಂಗಳೂರು ನಗರದಲ್ಲಿ ವಾಸಿಸುತ್ತಿರುವ ಅಕ್ರಮ ವಲಸಿಗರಾದ ಬಾಂಗ್ಲಾದೇಶಿಗಳು ಸರ್ಕಾರದ ಸೌಲಭ್ಯಗಳನ್ನು ಅನಧಿಕೃತವಾಗಿ ಬಳಸುತ್ತಿದ್ದು, ಇದಕ್ಕೆ ಯಾವುದೇ ರೀತಿಯ ತೆರಿಗೆ ಪಾವತಿಸುತ್ತಿಲ್ಲವಾದ್ದರಿಂದ ಕನ್ನಡಿಗರಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ. |
| ಇ) | ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶಿಯರು ಸ್ಥಳೀಯವಾಗಿ ಲಭ್ಯವಿರುವ ಶ್ರಮಜೀವಿ ಕೆಲಸಗಳನ್ನು ಕಡಿಮೆ ಕೂಲಿಗೆ ಮಾಡುತ್ತಿರುವುದರಿಂದ ಕನ್ನಡಿಗರಿಗೆ ಸಣ್ಣಪುಟ್ಟ ಕೆಲಸಗಳು ಲಭ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸರ್ಕಾರವು ಈ ಅಕ್ರಮ ಬಾಂಗ್ಲಾದೇಶಿಯರಿಗೆ ವರ್ಕ್ ಪರ್ಮಿಟ್ ನೀಡಿದೆಯೇ; | ಬಂದಿರುವುದಿಲ್ಲ. |

ಈ) ಅಕ್ರಮ ವಲಸಿಗರು ಬೆಂಗಳೂರಿನಲ್ಲಿ ನೆಲೆಸಿ ಕೊಲೆ ದರೋಡೆ ಮತ್ತಿತರ ಪ್ರಕರಣಗಳನ್ನು ನಡೆಸಿ ಬಳಿಕ ತಮ್ಮ ತವರಿಗೆ ಹೋಗುತ್ತಿರುವುದರಿಂದ ಹಲವಾರು ಕೊಲೆ ಪ್ರಕರಣಗಳು ಇದುವರೆಗೂ ಪತ್ತೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅಕ್ರಮ ಬಾಂಗ್ಲಾ ವಲಸಿಗರ ಬಗ್ಗೆ ಸರ್ಕಾರದ ನಿಲುವೇನು ?

ಬಂದಿರುವುದಿಲ್ಲ.

ಅಕ್ರಮ ಬಾಂಗ್ಲಾ ವಲಸಿಗರು ದರೋಡೆ ಮತ್ತಿತರ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿರುದ್ಧ ದಾಖಲಾಗಿರುವ ಪ್ರಕರಣಗಳ ವಿವರ ಈ ಕೆಳಕಂಡಂತಿರುತ್ತದೆ :-

| **ವರ್ಷ** | **ಕೊಲೆ** | **ದರೋಡೆ** | **ಇತರೆ ಪ್ರಕರಣ** | **ಒಟ್ಟು** |
|---|---|---|---|---|
| **2021** | - | - | 2 | 2 |
| **2022** | - | - | 7 | 7 |
| **2023** | 1 | - | 1 | 2 |
| **2024** | - | - | 1 | 1 |
| **ಒಟ್ಟು** | 1 | - | 11 | 12 |

1. ಬೆಂಗಳೂರು ನಗರದಲ್ಲಿ ಅಕ್ರಮ ವಲಸಿಗರನ್ನು ಪತ್ತೆಹಚ್ಚಲು ಪೊಲೀಸ್ ಠಾಣಾ ಮಟ್ಟದಲ್ಲಿ ಗುಪ್ತಚರ ಸಿಬ್ಬಂದಿ ಹಾಗೂ ಕ್ರೈಂ ಸಿಬ್ಬಂದಿಗಳು ವಿದೇಶಿಯರ ಚಲನವಲನಗಳ ಮೇಲೆ ನಿಗಾ ವಹಿಸುವಂತೆ ಸೂಕ್ತ ತಿಳುವಳಿಕೆ ನೀಡಲಾಗಿರುತ್ತದೆ.
2. ರಾಜ್ಯದಲ್ಲಿ ಹೆಚ್ಚು ವಿದೇಶಿ ಪ್ರಜೆಗಳು ವಾಸಿಸುವ ಸ್ಥಳಗಳ ಬಳಿ ಸತತ ನಿಗಾವಹಿಸಲು ಮೀಸಲು ಪಡೆ ಹಾಗೂ ಸಿಬ್ಬಂದಿಗಳನ್ನು ನಿಯೋಜಿಸಿ ಕ್ರಮ ಜರುಗಿಸಲು ಎಲ್ಲಾ ವಿಭಾಗೀಯ ಉಪ ಆಯುಕ್ತರುಗಳಿಗೆ ಸೂಚಿಸಲಾಗಿರುತ್ತದೆ.
3. ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳ ವಿರುದ್ಧ ಪ್ರಕರಣ ದಾಖಲಿಸಿ ಮಾನ್ಯ ನ್ಯಾಯಾಲಯದಲ್ಲಿ ಇತ್ಯರ್ಥವಾಗುವವರೆಗೂ ಸಂಬಂಧಪಟ್ಟ ಇಲಾಖೆಯಿಂದ ನಿರ್ಗಮನ ಪರವಾನಿಗೆ (Exit Permit) ಯನ್ನು ಪಡೆಯುವವರೆಗೆ, ಇವರುಗಳನ್ನು ಡಿಟೆನ್‌ಷನ್ ಸೆಂಟರ್ ನಲ್ಲಿ ಇರಿಸಿ ಪ್ರಕರಣ ಇತ್ಯರ್ಥವಾದ ನಂತರ ವಿದೇಶಿ ಪ್ರಜೆಯ ಗಡಿಪಾರು ನಿಯಮವನ್ನು ಪಾಲಿಸಲಾಗುತ್ತಿದೆ.

ಒಇ 278 ಪಿಎಂಎಸ್ 2024

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು